# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಸಂಖ್ಯೆ | : | 254 (43) |
| ಸದಸ್ಯರ ಹೆಸರು | : | ಶ್ರೀ ಅರುಣ ಶಹಾಪುರ |
| ಉತ್ತರಿಸುವ ದಿನಾಂಕ | : | 04.03.2020 |
| ಉತ್ತರಿಸುವ ಸಚಿವರು | : | ಮಾನ್ಯ ಉಪ ಮುಖ್ಯಮಂತ್ರಿಯವರು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) |

| ಕ್ರ.ಸಂ. | ವಿಷಯ | ಉತ್ತರ |
|---|---|---|
| ಅ) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಡಿಯಲ್ಲಿನ ಸಿಬ್ಬಂದಿಗಳನ್ನು ಆಯಾ ಇಲಾಖಾ ಸಿಬ್ಬಂದಿಗಳಾಗಿ ವಿಲೀನಗೊಳಿಸುವ ಕುರಿತು ಸರ್ಕಾರದ ನಿಲುವೇನು; | ವಿವಿಧ ಉದ್ದೇಶಗಳನ್ನು ಈಡೇರಿಸುವ ಸಲುವಾಗಿ ಸರ್ಕಾರದಲ್ಲಿ ಸಂಘ/ಮಂಡಳಿ/ನಿಗಮಗಳನ್ನು ಸ್ಥಾಪಿಸಲಾಗಿರುತ್ತದೆ. ಅದರಂತೆ ಸಮಾಜ ಕಲ್ಯಾಣ ಇಲಾಖೆಯಲ್ಲಿ ಸಹ ಗ್ರಾಮೀಣ ಪ್ರದೇಶದ ಬಡ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಒದಗಿಸಲು ವಸತಿ ಶಾಲೆಗಳನ್ನು ಪ್ರಾರಂಭಿಸಿ ನಿರ್ವಹಿಸಲು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಸ್ಥಾಪಿಸಲಾಗಿದೆ.<br><br>ಈ ಸಂಘವು ಕರ್ನಾಟಕ ಸಹಕಾರ ಸಂಘಗಳ ನೋಂದಣಿ ಕಾಯ್ದೆ 1960 ರಡಿಯಲ್ಲಿ ಸ್ಥಾಪಿತವಾದ ಸಂಸ್ಥೆಯಾಗಿದ್ದು, ಸಂಘ ಸಂಸ್ಥೆಗಳ ಸಿಬ್ಬಂದಿಗಳನ್ನು ರಾಜ್ಯ ಸಿವಿಲ್ ಸೇವೆಯಲ್ಲಿ ವಿಲೀನಗೊಳಿಸಲು ಅವಕಾಶವಿರುವುದಿಲ್ಲ. |
| ಆ) | ಇದೇ ಕ್ರೈಸ್ ಅಡಿ ಕಾರ್ಯನಿರ್ವಹಿಸುತ್ತಿದ್ದ ಅಲ್ಪಸಂಖ್ಯಾತ ಮೊರಾರ್ಜಿ ದೇಸಾಯಿ ಶಾಲೆಗಳ ಸಿಬ್ಬಂದಿಗಳನ್ನು ಅಲ್ಪಸಂಖ್ಯಾತ ಕಲ್ಯಾಣ ಇಲಾಖಾ ಸಿಬ್ಬಂದಿಗಳನ್ನಾಗಿ ಪರಿಗಣಿಸಲಾಗಿದ್ದು. ಇದೇ ಮಾದರಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಿಬ್ಬಂದಿಗಳನ್ನು ವಿಲೀನ ಮಾಡಲು ತಾರತಮ್ಯ ಮಾಡುತ್ತಿರುವುದಕ್ಕೆ ಕಾರಣಗಳೇನು: | ಸದರಿ ಸಂಘದ ವೃಂದ ಮತ್ತು ನೇಮಕಾತಿ ನಿಯಮಗಳಂತೆ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ನೇಮಿಸಲಾಗುತ್ತಿದೆ.<br><br>ಮಂಜೂರಾದ ಗ್ರೂಪ್-ಡಿ ಹುದ್ದೆಗಳನ್ನು ಆರ್ಥಿಕ ಇಲಾಖೆಯ ನಿರ್ದೇಶನದನ್ವಯ ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲಾಗುತ್ತಿದೆ.<br><br>ಶಿಕ್ಷಣ ಇಲಾಖೆಯಿಂದ ನೇಮಿಸಿಕೊಂಡಿರುವ ಶಿಕ್ಷಕರುಗಳಿಗೆ ನೀಡುವ ವೇತನದಂತೆಯೇ ಸಂಘದ ಶಿಕ್ಷಕರುಗಳಿಗೂ ಸಹ ನೀಡಲಾಗುತ್ತಿದೆ. ಅಲ್ಲದೇ ಶಾಲೆ ಆವರಣದಲ್ಲಿ ಎಲ್ಲಾ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ವಸತಿ ಸೌಕರ್ಯ ಮತ್ತು ಇತರೇ ಸವಲತ್ತುಗಳನ್ನು ನೀಡಲಾಗುತ್ತಿದೆ.<br><br>ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಮೇಲ್ಕಂಡ ಸಂಘ ಸ್ವಾಯತ್ತ ಸಂಸ್ಥೆಯಾಗಿ ಕಾರ್ಯನಿರ್ವಹಿಸುತ್ತಿದೆ.<br><br>ಅಲ್ಪಸಂಖ್ಯಾತಕಲ್ಯಾಣ ಇಲಾಖೆಯವರು ಅವರದೇ ಆದ ಕಾರಣಗಳಿಂದ ಅಲ್ಪಸಂಖ್ಯಾತ ವಸತಿ ಶಾಲೆಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಬೇರ್ಪಡಿಸಿ ಸಿಬ್ಬಂದಿಗಳನ್ನು ಸಹ ನೇಮಿಸಿಕೊಂಡಿರುತ್ತಾರೆ. ಆದ್ದರಿಂದ, ಸದರಿ ವಿಷಯದಲ್ಲಿ ತಾರತಮ್ಯ ಮಾಡುತ್ತಿರುವ ಪ್ರಶ್ನೆ ಉದ್ಭವಿಸುವುದಿಲ್ಲ. |

| | | |
|---|---|---|
| ಇ) | ಇದನ್ನು ಸರಿಪಡಿಸಲು ಸರ್ಕಾರವು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳಲಾಗುವುದು? (ಸಂಪೂರ್ಣ ವಿವರ ನೀಡುವುದು) | ಉದ್ಭವಿಸುವುದಿಲ್ಲ |

ಸಕಇ 68 ಮೊದೇಶಾ 2020

**(ಗೋವಿಂದ ಎಂ. ಕಾರಜೋಳ)**
ಉಪ ಮುಖ್ಯಮಂತ್ರಿಯವರು (ಲೋಕೋಪಯೋಗಿ
ಮತ್ತು ಸಮಾಜ ಕಲ್ಯಾಣ ಸಚಿವರು)